# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 1/7/2020

### ಮತ್ತೆ ರೈತರ ವಿರುದ್ಧ ಸಿಡಿಮಿಡಿಗೊಂಡು ವಿವಾದ ಸೃಷ್ಟಿಸಿದ ಸಚಿವ ಮಾಧುಸ್ವಾಮಿ

ತುಮಕೂರು: ಕೋಲಾರದ ರೈತ ಮಹಿಳೆಯನ್ನು ನಿಂದಿಸಿದ್ದ ಆರೋಪಕ್ಕೆ ತುತ್ತಾಗಿದ್ದ ಕಾನೂನು ಸಚಿವ ಜೆ.ಸಿ.ಮಾಧುಸ್ವಾಮಿ ಮತ್ತೊಮ್ಮೆ ರೈತರ ಮೇಲೆ



ಸಿಡಿಮಿಡಿಗೊಂಡಿರುವ ಘಟನೆ ತುಮಕೂರಿನಲ್ಲಿ ಸೋಮವಾರ ನಡೆದಿದ್ದು, ಈ ವಿಡಿಯೋ ವೈರಲ್ ಆಗಿದೆ. ರೈತರು ಭೂಸ್ವಾಧೀನ ಕಾಯ್ದೆ ತಿದ್ದುಪಡಿ ವಿರೋಧಿಸಿ ತುಮಕೂರಿನ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸುತ್ತಿದ್ದ ವೇಳೆ ಅಲ್ಲಿಗೆ ಆಗಮಿಸಿದ ಮಾಧುಸ್ವಾಮಿಗೆ ಪ್ರತಿಭಟನಾನಿರತರು ಅಹವಾಲು ಹೇಳಿಕೊಳ್ಳಲು ಮುಂದಾದರು. ಈ ವೇಳೆ ಸಚಿವರು 'ನಾನು ಮಾತನಾಡುತ್ತಿದ್ದೇನೆ. ನಾನು ಹೇಳಿದ್ದನ್ನು ಕೇಳಬೇಕು' ಎಂದು ಹರಿಹಾಯ್ದರು. ಇದಕ್ಕೆ ರೈತರ ಮುಖಂಡರು 'ರೈತರು ಹೇಳಿದ್ದನ್ನು ಕೇಳಿಸಿಕೊಳ್ಳಿ, ಸಮಸ್ಯೆ ಆಲಿಸಿ' ಎಂದಾಗ ಮಾಧುಸ್ವಾಮಿ ಕೋಪಗೊಂಡರು.